**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಮಂಗಳೂರು, ಇಲ್ಲಿನ ಅಧಿಕಾರಿ/ಸಿಬ್ಬಂದಿಗಳ ವೇತನ ಭತ್ಯೆಗಳಿಗೆ ಮರು ಹೊಂದಾಣಿಕೆ ಮೂಲಕ ಹೆಚ್ಚುವರಿ ಅನುದಾನ ಒದಗಿಸುವ ಬಗ್ಗೆ.

**ಓದಲಾಗಿದೆ:** ಕಾರ್ಯದರ್ಶಿ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಇವರ ಪತ್ರ ಸಂಖ್ಯೆ:ಕಾ/ಕ.ಅ.ಪ್ರಾ/ಮಂ/2016-17/420, ದಿನಾಂಕ:19.11.2016.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಇವರು 2016-17ನೇ ಸಾಲಿನಲ್ಲಿ ವೇತನ ಭತ್ಯೆಗಳಿಗಾಗಿ ರೂ.13.85 ಲಕ್ಷಗಳು ಕೊರತೆಯುಂಟಾಗಿರುವುದರಿಂದ, ರೂ.13.85 ಲಕ್ಷಗಳನ್ನು (ಯೋಜನೆ) ಲೆಕ್ಕಶೀರ್ಷಿಕೆ 2217-80-001-1-06-059 ರಡಿ ಲಭ್ಯವಿರುವ ಅನುದಾನದಿಂದ ಮರುಹೊಂದಾಣಿ ಮೂಲಕ ಹೆಚ್ಚುವರಿಯಾಗಿ ಒದಗಿಸುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶದ ಸಂಖ್ಯೆ:ಪಿಡಿ 21 ಪಿಟಿಪಿ 2016, ದಿನಾಂಕ: 17.01.2017**

2016-17ನೇ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿ/ಸಿಬ್ಬಂದಿಗಳ ವೇತನ ಪಾವತಿಗೆ ಕೊರತೆಯಾಗಿರುವ ರೂ.13.85 ಲಕ್ಷ (ಹದಿಮೂರು ಲಕ್ಷದ ಎಂಬತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಲೆಕ್ಕಶೀರ್ಷಿಕೆ 2217-80-001-1-06-059 ರಲ್ಲಿ ಲಭ್ಯವಿರುವ ಅನುದಾನದಿಂದ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿರುವಂತೆ ಮರುಹೊಂದಾಣಿಕೆ ಮೂಲಕ ಒದಗಿಸಲು ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 11 ಟಿಎಫ್‌ಪಿ 2007, ದಿನಾಂಕ:27-11-2007 ರಲ್ಲಿ ಆಡಳಿತ ಇಲಾಖೆಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/01/17

**(ಹೆಚ್.ಸಿ.ಹರ್ಷರಾಣಿ)**
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್-5)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ), **ಕರ್ನಾಟಕ, ಹೊಸ ಕಟ್ಟಡ ಆಡಿಟ್ ಭವನ** ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, **ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329,** ಬೆಂಗಳೂರು.

18/1/17